ಇ) ಸದರಿ ಸ್ಯಾನಿಟೋರಿಯಂನ ಅಭಿವೃದ್ಧಿಗಾಗಿ ಸರ್ಕಾರ ವಿಶೇಷ ಯೋಜನೆ ಹಮ್ಮಿಕೊಳ್ಳುವುದೇ?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಅ) ರೋಗಿಗಳಿಗೆ ಬೇಕಾದ ಪ್ರಾಥಮಿಕ ಸೌಲಭ್ಯಗಳಾದ ಔಷಧೋಪಚಾರ ಉಚಿತ ಊಟೋಪಚಾರ . ಸೌಲಭ್ಯಗಳನ್ನು ಒದಗಿಸಲಾಗಿದೆ.

ಆ) ಬಂದಿದೆ.

ಇ) ಈ ಸ್ಯಾನಿಟೋರಿಯಂಗೆ ನೀರಿನ ಸೌಲಭ್ಯಕ್ಕಾಗಿ ಒಂದು ಬೋರ್‌ವೆಲ್ ಮತ್ತು ಅಡುಗೆ ಮಾಡಲು ಅಡಿಗೆ ಕೊಠಡಿಯಲ್ಲಿ ಅನಿಲದ ಅಡುಗೆ ಸಲಕರಣೆಗಳನ್ನು ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ರಾಜ್ಯದಲ್ಲಿ ಮುಕ್ತ ವಿಶ್ವವಿದ್ಯಾನಿಲಯ ತೆರೆಯುವಿಕೆ

503 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮುಕ್ತ ವಿಶ್ವವಿದ್ಯಾನಿಲಯ ಮತ್ತು ತಾಂತ್ರಿಕ ಶಿಕ್ಷಣ ವಿಶ್ವವಿದ್ಯಾನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗುವುದು?

ಆ) ಇವುಗಳಿಗಾಗಿ ಉಪ ಕುಲಪತಿಗಳನ್ನು ಮತ್ತು ಇತರೆ ಸಿಬ್ಬಂದಿ ವರ್ಗದವರನ್ನು ನೇಮಕ ಮಾಡಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ?

ಇ) ಈ ವರ್ಷದ ಆಯವ್ಯಯದಲ್ಲಿ ಈ ವಿಶ್ವವಿದ್ಯಾನಿಲಯಗಳ ಸ್ಥಾಪನೆಗಾಗಿ ಇಟ್ಟಿರುವ ಹಣ ಎಷ್ಟು?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು) :

ಅ) ಈ ಬಗ್ಗೆ ಕರಡು ವಿಧೇಯಕಗಳನ್ನು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಂಡಿಸಲಾಗುತ್ತಿದ್ದು ಅನುಮತಿ ದೊರೆತ ಕೂಡಲೇ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಆ) ಪ್ರಶ್ನೆ (ಅ) ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಸ್ತುತ ಸಾಲಿನಲ್ಲಿ ಯೋಜನೆ ಶೀರ್ಷಿಕೆ ಅಡಿಯಲ್ಲಿ ಮುಕ್ತ ವಿಶ್ವವಿದ್ಯಾನಿಲಯದ ಸ್ಥಾಪನೆಗಾಗಿ ರೂ. 50.00 ಲಕ್ಷ ರೂ.ಗಳು ಮತ್ತು

ಆ) ತಾಂತ್ರಿಕ ವಿಶ್ವವಿದ್ಯಾನಿಲಯಗಳನ್ನೊಳಗೊಂಡಂತೆ ಹೊಸ ವಿಶ್ವವಿದ್ಯಾನಿಲಯಗಳ ಸ್ಥಾಪನೆಗಾಗಿ ರೂ. 10.00 ಲಕ್ಷ ರೂ.ಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಹಾರನಹಳ್ಳಿ ರಾಮಸ್ವಾಮಿ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ದಿನಾಂಕ : 31-8-1994ರಂದು ಲಿಖಿತ ಮೂಲಕ ಉತ್ತರಿಸುವ 5ನೇ ಪಟ್ಟಿಯಲ್ಲಿರುವ 59 ಪ್ರಶ್ನೆಗಳ ಪೈಕಿ ಪ್ರಶ್ನೆಗಳ ಸಂಖ್ಯೆ 381, 502, 653, 67, 65, 498 ಮತ್ತು 240 ಪ್ರಶ್ನೆಗಳನ್ನು ಹೊರತುಪಡಿಸಿ ಇನ್ನುಳಿದ 52 ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಬೀದರ್ ಜಿಲ್ಲೆಯಲ್ಲಿ ಅರಣ್ಯ ಬೆಳೆಸುವ ಬಗ್ಗೆ

376 - ಶ್ರೀ ನಾರಾಯಣರಾವ್ ಮನಹಳ್ಳಿ (ಬೀದರ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಪ್ರಮಾಣದ ಅರಣ್ಯವನ್ನು ಬೆಳೆಸುವ ಉದ್ದೇಶವನ್ನು ಹೊಂದಲಾಗಿತ್ತು?